> ಬೋದಿಲೇರ್ ಯಾಕಿಷ್ಟ ಅಂದರ, ಅವನು ತನ್ನ ಕಾಲಘಟ್ಟದಲ್ಲಿ ಕಂಡ ಎಲ್ಲ ನೋವುಗಳನ್ನು ಹೇಳೋಕೆ ಒಂದು ರಿದಂ ಹುಡ್ಕೊಂಡಿದ್ದಾನ. ನರಳಾಟದಲ್ಲೂ ಒಂದು ಸ್ಪಾರ್ಕ್ ಕಾಣ್ತಾನ.

ಹೋಗೋದರಿ. ಮೈಮ್ಯಾಲ ಬಿದ್ದು ಉಳ್ಳಾಡೋದರಿ. ಆಕಿ ಪ್ರೀತೀಲೆ ಹೂವು ಕೊಡೋಳು. ಆ ಹೂವು ಮನೀಗೆ ತರೋಹಂಗಿಲ್ಲ. ನಮ್ಮಜ್ಜಿ, 'ಹೆಲನ್‌ಬಾಯಿ ಮನೀಗ್ ಹೋಗೀರಾ? ಮಾಂಸಮಡ್ಡಿ ತಿನ್ನೋರ ಮನೀಗೆ ಹೋಗೀರಾ?' ಅನ್ನೋಳು. ಭಾಂವಿ ಕಟ್ಟೇಮ್ಯಾಲ ಬತ್ತಲೆ ನಿಲ್ಲಿಸಿ, ತಲಿಮ್ಯಾಲ ಬುದುಬುದು ನೀರು ಹಾಕಿ ಮಡಿ ಮಾಡೋಳು.

◆ **ಬಾಲ್ಯದ ಕರಾವಳಿ ಈಗ ಹೇಗಿದೆ?**

ಭಾಳ ಬದಲಾಗ್ಯದ. ಕಾರಣೆಲ್ಲ ಏನಿಲ್ಲ ಸುಮಸುಮ್ಮನೆ ಮುಸಲೋರನ್ನ ಕ್ರಿಶ್ಚನ್ನರ ಹೇಟ್ ಮಾಡೋದು. ನಾನು ನಿಮ್ಹಾನ್ಸ್‌ದೊಳಗ ಟ್ರೀಟ್ಮೆಂಟ್ ತಗೊಂಡ ಮ್ಯಾಲ, ಒಬ್ಬ ಕ್ರಿಶ್ಚಿಯನ್ ಸಿಸ್ಟರ್ ಮನೆಯೊಳಗ ಇಟ್ಟಿದ್ದರು. ಎರಡು ವರ್ಷ ನನಗ ಹೀಂಗ ಪ್ರೀತಿ ಮಾಡಿದರ್ರೀ ಅವರು.

◆ **ನಿಮ್ಮ 'ಹೆಲನ್‌ಬಾಯಿ ಮತ್ತು ತುಂಬೆ ಹೂವು' ಬಹಳ ಒಳ್ಳೆಯ ಕತೆ.**

ಕನ್ನಡದಲ್ಲೇ ಆ ಕತೆ ವಿಶಿಷ್ಟ ಅಂತ ಜಯಂತ ಹೇಳ್ತಾನ. ಹೆಲನ್‌ಬಾಯಿ ಎಂಥಾ ಶಾಂತ ಮುಖ? ದೇವಿಯಿದ್ದಂಗೆ. ಆಕೆ, ನಮ್ಮ ತಾಯಿ ಫ್ರೆಂಡ್ಸಾಗಿದ್ದರು. ನಮ್ಮ ತಾಯಿ ಅಂಥಾದ್ದೇ ಕಿವ್ಯಾಗ ಹಾಕ್ಕೊಂಡಿರ್ತಿದ್ದಳು, ನೀಲಿ ಹಳ್ಳಿಂದು. ಆಕಿ ಶಿಸ್ತು, ಜಡೆ ಬಾಚೋದು, ಆಕಿನೊಳಗೆ ನಾವು ಅಮ್ಮನ ರೂಪ ಕಾಣತಿದ್ದಿವಿ. ಆಕಿ ಹುಲ್ಲಿಗಂತ ಗದ್ದೆಬದಿ ಬಂದಾಗ, 'ಅಮ್ಮಾ, ಹುಲ್ಲಿಗೆ ಹೋಗಿ ಬತ್ತೇ' ಅಂತಿದ್ದಳು. ಚರ್ಚಿಗೆ ಹೋಗೋ ಮುಂದ, 'ಅಮ್ಮಾ, ಚರ್ಚಿಗೆ ಹೋಗಿ ಬತ್ತೇ' ಅನ್ನೋಳು.

◆ **ಅಜ್ಜಿ ಕೊನೇಗೆ ಬದಲಾದರಾ?**

ಬದಲಾದಳು. ಎಷ್ಟೇ ಪ್ರತ್ಯೇಕತೇಲಿ ನೋಡಿದರೂ, ಆಕಿಗೆ ಹೆಲನ್‌ಬಾಯಿ ಬಗ್ಗೆ ಒಂದು ಪ್ರೀತಿ ಇರತಿತ್ತು. ಚಟ್ನಿರುಬ್ಬಿ ತೆಂಗಿನ ಗರಟದೊಳಗೆ ಕೊಡೋದು, ಚೊಂಬಿನೊಳಗೆ ನೀರು ಎತ್ತಿ ಹೊಯ್ಯೋದು, ಬೆಲ್ಲ ಕೊಡೋದು, ಮಾಡಿದ ಅಡಿಗೆ ಕೊಡೊದು, ಕಷ್ಟಸುಖ ಕೇಳೋದು, ಹೆಲನ್‌ಬಾಯಿ ಅತ್ತರೆ ತಾನೂ ಎರಡು ಹನಿ ಕಣ್ಣೀರು ಹಾಕೋದು ಇವೆಲ್ಲ ಇದ್ದವು. ಕಡಕಡೀಕೆ ಎಲ್ಲ ಸಂಪ್ರದಾಯ ಬಿಟ್ಟುಬಿಟ್ಳು. 'ಹೆಲನ್‌ಬಾಯಿ ಮತ್ತು ತುಂಬೆಹೂವು' ಕತೆಯಲ್ಲಿ ಆಕೀಗೆ ದೇವಸ್ಥಾನದ ಹಲಸಿನ ಕೊಟ್ಟೆಕಡುಬು ಕೊಟ್ಟಿಲ್ಲಂತ ಮಕ್ಕಳು ಹಳಹಳ ಮಾಡೋ ಪ್ರಸಂಗ ಬರ್ತದ. ಅದನ್ನ ಓದಿ ಹೆಲನ್‌ಬಾಯಿಗೆ ಕಡುಬು ಮಾಡಿ ಕೊಟ್ಟು ಬಂದಳು. ಮತ್ತಾಕಿ ಹಾಸ್ಪಿಟಲಿನಲ್ಲಿದ್ದಾಗ ಹೋಗಿ ಆಕೀಗೆ ತಬ್ಬಕೊಂಡು ಬಂದಳು. ಮನೇಲೆ ಎರಡು ಕ್ರಿಶ್ಚಿಯನ್ ಸೊಸ್ತೇರನ್ನು ತಂದಳು. ತಂಗಿ ಮಗನಿಗೆ ವಿಧವೆನ ತಂದುಕೊಂಡಳು. ಎರಡು ಜನ ಬಿಲ್ಲವ ಅಳಿಯಂದಿರು ಬಂದರು. ಕಠೋರ ಅಗ್ರಹಾರದ ನಡುವೆ ಕ್ರಾಂತಿ ಮಾಡಿದಳು. ಅವರೆಲ್ಲ ಮನೀಗೆ ಬರೋದು ಹೋಗೋದು ಪೂಜೆ ಪುನಸ್ಕಾರ ಎಲ್ಲ ಮಾಡ್ತಾರ. ನಮ್ಮಜ್ಜಿ ವಿಶೇಷ ಪರ್ಸನಾಲಿಟಿ. ವೈಲಿನ್ ನುಡಸ್ತಿದ್ದಳು. ಹಾಡತಿದ್ದಳು. ಸುಬ್ಬಲಕ್ಷ್ಮಿ ಹಾಡಂದರ ಪ್ರಾಣ.